**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.**265/2021

ಪಿ.ಡಬ್ಲ್ಯೂ: **7**

ಸಿ.ಡಬ್ಲ್ಯೂ: 14

| | | |
|---|---|---|
| ಹೆಸರು | : | ಮೇಘ ಟಿ ಎನ್ |
| ಗಂಡನ ಹೆಸರು | : | ನಾಗರಾಜ್ ಹನುವಾಗನ್ |
| ವಯಸ್ಸು | : | 29 ವರ್ಷ |
| ಉದ್ಯೋಗ | : | ಪಿ ಎಸ್ ಐ |
| ವಾಸಸ್ಥಳ | : | ಚಿತ್ರದುರ್ಗ |

ಸಾಕ್ಷಿಯು ವೀಡಿಯೋ ಕಾನ್ಫರೆನ್ಸ್ ಮೂಲಕ ನ್ಯಾಯಾಲಯದ ಮುಂದೆ ಹಾಜರಾಗಿರುತ್ತಾರೆ.

**ದಿನಾಂಕ: 02-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ : ಸ.ಸ.ಅ. ರವರಿಂದ.**

ನಾನು ದಿ:**08-01-2021** ರಿಂದ **19-01-2022** ರವರೆಗೆ ಲಕ್ಕವಳ್ಳಿ **ಪೋಲೀಸ್ ಠಾಣೆಯಲ್ಲಿ** ಪಿ ಎಸ್ ಐ **ಆಗಿ ಕರ್ತವ್ಯ** ನಿರ್ವಹಿಸಿರುತ್ತೇನೆ.

ದಿನಾಂಕ: 06-07-2020 ರಂದು ಈ ಪ್ರಕರಣದಲ್ಲಿ ಚಾಸಾ-6 ರವರಿಂದ ವರದಿಯನ್ನು ಸ್ವೀಕರಿಸಿ, ಆರೋಪಿಯ ವಿರುದ್ಧ ಆರೋಪ ಸಾಬೀತಾದ ಕಾರಣ ಆರೋಪಿಯ ವಿರುದ್ಧ ದೋಷರೋಪಣಾ ಪಟ್ಟಿಯನ್ನು ತಯಾರಿಸಿ, ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಚಾಸಾ-6 ರವರಿಂದ ಪಡೆದಿರುವ ವರದಿ ಆಗಿದ್ದು, ಸದರಿ ದಾಖಲೆಯನ್ನು ನಿಪಿ-13 ಎಂದು, ಸಾಕ್ಷಿಯ ಸಹಿಯನ್ನು ನಿಪಿ-13(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲು : ಆರೋಪಿತರ ಪರ** ಶ್ರೀ ಕೆಪಿ **ವಕೀಲರಿಂದ.**

ನಾನು ಘಟನಾ ಸ್ಥಳಕ್ಕೆ ಭೇಟಿ ನೀಡಿರುವುದಿಲ್ಲ. ನಮ್ಮ ಅಧೀನ ಅಧಿಕಾರಿಗಳುನೀಡಿದ ವರದಿಯನ್ನು ಸ್ವೀಕರಿಸಿಕೊಂಡು ಆರೋಪಿಯ ವಿರುದ್ಧ ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ಆರೋಪಿ ಯಾವುದೇ ತಪ್ಪು ಮಾಡದೇ ಇದ್ದರೂ ಸಹ ಆರೋಪಿಯ ವಿರುದ್ಧಸುಳ್ಳು ದೋಷರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೀರಾ ಎಂದರೆ ಸರಿಯಲ್ಲ.

**<u>ಮರುವಿಚಾರಣೆಃ</u>** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

ಓ. ಕೇ. ಸ. ಇ. ಎ. ಒ.

ಸಹಿ/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ. ರವರು, ತರೀಕೆರೆ.